I/359103/2022

ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಡಿಟಿಇ/32/ಸಿಡಿಸಿ(2)/2022(771269)

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001,
ದಿನಾಂಕ:23/12/2022.

## :ಸುತ್ತೋಲೆ:

ವಿಷಯ: ಇಲಾಖೆಯ ಪೂರ್ವಾನುಮತಿ ಪಡೆಯದೆ ಕೈಗಾರಿಕಾ/ಅಲ್ಪಾವಧಿ ತರಬೇತಿಗೆ ಹಾಜರಾಗಿ ಘಟನೋತ್ತರ ಅನುಮತಿ ಕೋರುವ ಬಗ್ಗೆ.

ಉಲ್ಲೇಖ: ವಿವಿಧ ಸರ್ಕಾರಿ ಪಾಲಿಟೆಕ್ನಿಕ್ / ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರ ಮನವಿ ಪತ್ರಗಳು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪಾಲಿಟೆಕ್ನಿಕ್ / ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೆಲವು ಬೋಧಕ ಸಿಬ್ಬಂದಿಯವರು ಪ್ರಾಂಶುಪಾಲರ ಹಂತದ ಅನುಮತಿಯೊಂದಿಗೆ ಇಲಾಖಾ ಅನುಮತಿಯನ್ನು ಕಾಯ್ದಿರಿಸಿ, ಕೈಗಾರಿಕಾ/ಅಲ್ಪಾವಧಿ ತರಬೇತಿಗೆ ಹಾಜರಾಗಿ ನಂತರ ಘಟನೋತ್ತರ ಅನುಮತಿಗೆ ಆಯುಕ್ತಾಲಯಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುತ್ತಿರುವುದು ಕಂಡು ಬಂದಿರುತ್ತದೆ.

ಈ ಹಿನ್ನೆಲೆಯಲ್ಲಿ ಉಪನ್ಯಾಸಕರು ಕಡ್ಡಾಯವಾಗಿ ಇಲಾಖೆಯ ಪೂರ್ವಾನುಮತಿಯನ್ನು ಪಡೆದು ತರಬೇತಿಗಳಿಗೆ ಹಾಜರಾಗಲು ಮತ್ತು ಇಲಾಖಾ ಪೂರ್ವಾನುಮತಿ ಪಡೆಯದೆ ಕೈಗಾರಿಕಾ/ಅಲ್ಪಾವಧಿ ತರಬೇತಿಗೆ ಹಾಜರಾದಲ್ಲಿ ಸಿಸಿಎ ನಿಯಮಾವಳಿ ಅನ್ವಯ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ತಿಳಿಸಲಾಗಿದೆ.

ಪ್ರಾಂಶುಪಾಲರು ಇಲಾಖೆಯ ಅನುಮತಿ ಪಡೆಯದೆ ಯಾವುದೇ ತರಬೇತಿಗೆ ಬೋಧಕ ವರ್ಗದವರನು ಬಿಡುಗಡೆಗೊಳಿಸದಂತೆ ಕ್ರಮವಹಿಸಲು ಮತ್ತು ಘಟನೋತ್ತರ ಅನುಮತಿಗೆ ಪ್ರಸ್ತಾವನೆಯನ್ನು ಇಲಾಖೆಗೆ ಸಲ್ಲಿಸದಿರಲು ಈ ಮೂಲಕ ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು(ಸಿಡಿಸಿ).

ಇವರಿಗೆ:

1. ಪ್ರಾಚಾರ್ಯರು, ಎಲ್ಲಾ ಸರ್ಕಾರಿ / ಅನುದಾನಿತ / ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್‌ಗಳಿಗೆ - ಇವರ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ.
2. ಇ-ಆಡಳಿತ ವಿಭಾಗಕ್ಕೆ, ಇಲಾಖಾ ವೆಬ್ ಸೈಟ್ ನಲ್ಲಿ ಪ್ರಚುರ ಪಡಿಸಲು.